# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | **: 35(41)** |
| **ಸದಸ್ಯರ ಹೆಸರು** | **: ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ)** |
| **ಉತ್ತರಿಸಬೇಕಾದ ದಿನಾಂಕ** | **: 13.02.2023** |
| **ಉತ್ತರಿಸುವ ಸಚಿವರು** | **: ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು** |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ಹಿರಿಯ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಖಾಲಿ ಇರುವ ದೈಹಿಕ ಶಿಕ್ಷಕರ ಹುದ್ದೆಗಳ ಸಂಖ್ಯೆ ಎಷ್ಟು ಹಾಗೂ ಯಾವ ಸಾಲಿನಿಂದ ಖಾಲಿ ಇವೆ; (ಪೂರ್ಣ ವಿವರ ನೀಡುವುದು. | ➢ **ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ** ದೈಹಿಕ ಶಿಕ್ಷಕರ ಖಾಲಿ ಹುದ್ದೆಗಳು: 2445 ಇರುತ್ತವೆ.<br>➢ 2007-08ನೇ ಸಾಲಿನಲ್ಲಿ ದೈಹಿಕ ಶಿಕ್ಷಕರನ್ನು ನೇಮಕ ಮಾಡಿಕೊಳ್ಳಲಾಗಿದೆ. ನಂತರದಲ್ಲಿ ವಯೋನಿವೃತ್ತಿ, ಮರಣ ಇತ್ಯಾದಿ ಕಾರಣಗಳಿಂದ ಮೇಲ್ಕಂಡಂತೆ ಹುದ್ದೆ ಖಾಲಿ ಇರುತ್ತದೆ.<br>➢ **ಸರ್ಕಾರಿ ಪ್ರೌಢಶಾಲೆಗಳಲ್ಲಿ** ದೈಹಿಕ ಶಿಕ್ಷಕರ ಖಾಲಿ ಹುದ್ದೆಗಳು:- 1500 ಇರುತ್ತವೆ.<br>➢ 2014-15ನೇ ಸಾಲಿನಲ್ಲಿ ದೈಹಿಕ ಶಿಕ್ಷಕರ ನೇಮಕಾತಿ ಮಾಡಲಾಗಿದೆ. ನಂತರದ ವರ್ಷಗಳಲ್ಲಿ ವಯೋ ನಿವೃತ್ತಿ, ಮರಣ ಅಥವಾ ಸ್ವಯಂ ನಿವೃತ್ತಿ ಹೊಂದಿದ ದಿನಾಂಕದಿಂದ ಹುದ್ದೆಗಳು ಖಾಲಿಯಿರುತ್ತವೆ. |
| ಆ. | ಹಿರಿಯ ಪ್ರಾಥಮಿಕ ಶಾಲೆ ಹಾಗೂ ಪ್ರೌಢ ಶಾಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ದೈಹಿಕ ಶಿಕ್ಷಕರನ್ನು ಹೆಚ್ಚುವರಿ ಶಿಕ್ಷಕರೆಂದು ಗುರುತಿಸಲಾಗುತ್ತಿದೆಯೇ; | ಹೌದು |
| ಇ. | ಈ ರೀತಿ ಹೆಚ್ಚುವರಿಯಾಗಿ ಗುರುತಿಸುವಲ್ಲಿ ಅನುಸರಿಸಲಾಗುತ್ತಿರುವ ಮಾನದಂಡಗಳೇನು; | **ಪ್ರಾಥಮಿಕ ಶಾಲೆ**ಗಳಲ್ಲಿ 200 ಕ್ಕಿಂತ ಹೆಚ್ಚಿನ ಮಕ್ಕಳ ದಾಖಲಾತಿ ಇರುವ ಶಾಲೆಗಳಲ್ಲಿ ದೈಹಿಕ ಶಿಕ್ಷಕರನ್ನು ನೀಡಲಾಗಿದೆ.<br>ಆಯಾ ಜಿಲ್ಲೆಗೆ ನಿಗದಿಪಡಿಸಲಾಗಿರುವ ಹುದ್ದೆಗಳ ಸಂಖ್ಯೆಯಲ್ಲಿ ಮಕ್ಕಳ ದಾಖಲಾತಿ 200 ಕ್ಕಿಂತ ಕಡಿಮೆ ಇರುವ ಶಾಲೆಗಳಲ್ಲಿ ಕರ್ತವ್ಯ ನಿರತ ದೈಹಿಕ ಶಿಕ್ಷಕರನ್ನು ಹೆಚ್ಚುವರಿ ಎಂದು ಗುರುತಿಸಿ 200 ಕ್ಕಿಂತ ಹೆಚ್ಚು ಮಕ್ಕಳ ದಾಖಲಾತಿ ಇರುವ ಶಾಲೆಗಳಿಗೆ ಜಿಲ್ಲೆಯೊಳಗೆ ಮರುಹೊಂದಾಣಿಕೆ ಮಾಡಲಾಗುವುದು.<br>**ಸರ್ಕಾರಿ ಪ್ರೌಢಶಾಲೆ**ಗಳಲ್ಲಿ ಪ್ರತಿ ಶಾಲೆಗಳಿಗೆ 1 ದೈಹಿಕ ಶಿಕ್ಷಕರನ್ನು ನೀಡಲಾಗುತ್ತಿದ್ದು ಮತ್ತು ವೈದ್ಯನಾಥನ್ ಸಮಿತಿಯ ವರದಿಯ ಪ್ರಕಾರ ಶೈಕ್ಷಣಿಕವಾಗಿ ಅತ್ಯಂತ ಹಿಂದುಳಿದಿರುವ ತಾಲ್ಲೂಕಿಗಳಲ್ಲಿ 500ಕ್ಕಿಂತ ಹೆಚ್ಚು ವಿದ್ಯಾರ್ಥಿಗಳಿರುವ ಸರ್ಕಾರಿ ಪ್ರೌಢಶಾಲೆಗಳಿಗೆ ಇಬ್ಬರು ದೈಹಿಕ ಶಿಕ್ಷಕರನ್ನು ನೀಡಲಾಗಿದೆ. ಪ್ರಯುಕ್ತ ಉಳಿದ ಶಾಲೆಗಳಲ್ಲಿ 09 ವಿಭಾಗದವರೆಗೆ ಕನಿಷ್ಟ 1 ದೈಹಿಕ ಶಿಕ್ಷಕರನ್ನು ನೀಡಲಾಗಿದೆ. 10 ಅಥವಾ 10 ಕ್ಕಿಂತ ಹೆಚ್ಚಿನ ವಿಭಾಗಗಳಿರುವ ಶಾಲೆಗಳಿಗೆ ಇಬ್ಬರು ದೈಹಿಕ ಶಿಕ್ಷಕರನ್ನು ನೀಡಲಾಗುತ್ತಿದೆ. |

| | | |
|---|---|---|
| ಈ. | ಪ್ರಸಕ್ತ ಸಾಲಿನಲ್ಲಿ ಎಷ್ಟು ಮಂದಿ ದೈಹಿಕ ಶಿಕ್ಷಕರನ್ನು ಹೆಚ್ಚುವರಿ ಶಿಕ್ಷಕರೆಂದು ಗುರುತಿಸಲಾಗಿದೆ. | <table><tr><td></td><td>ಹೆಚ್ಚುವರಿ ಗುರುತಿಸಿರುವ ದೈಹಿಕ ಶಿಕ್ಷಕರ ಹುದ್ದೆಗಳು</td></tr><tr><td>**ಸರ್ಕಾರಿ ಪ್ರಾಥಮಿಕ ಶಾಲೆ**</td><td>936</td></tr><tr><td>**ಸರ್ಕಾರಿ ಪ್ರೌಢಶಾಲೆ:-**</td><td>05</td></tr></table> |
| ಉ. | ಹೆಚ್ಚುವರಿ ದೈಹಿಕ ಶಿಕ್ಷಕರನ್ನು ಬೇರೆಡೆಗೆ ನಿಯೋಜಿಸುವಲ್ಲಿ/ ವರ್ಗಾವಣೆ ಗೊಳಿಸುವಲ್ಲಿ ಸರ್ಕಾರ ಅನುಸರಿಸಲಾಗುತ್ತಿರುವ ಮಾನದಂಡಗಳೇನು; | ಕ್ರಮ ಸಂಖ್ಯೆ (ಇ) ರಲ್ಲಿರುವ ಉತ್ತರವೇ ಅನ್ವಯವಾಗುತ್ತದೆ. |
| ಊ. | ದೈಹಿಕ ಶಿಕ್ಷಣ ವಿಭಾಗದಲ್ಲಿ ಹೆಚ್ಚುವರಿ ಎಂದು ಗುರುತಿಸಿ, ಶಿಕ್ಷಕರ ನಿಯೋಜನೆಗೊಳಿಸುವುದರಿಂದ ವಿದ್ಯಾರ್ಥಿಗಳ ದೈಹಿಕ ಶಿಕ್ಷಣಕ್ಕೆ ಅನ್ಯಾಯ ಉಂಟಾಗುವುದಿಲ್ಲವೇ; | ಇಲ್ಲ.<br>❖ **ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ** 200 ಕ್ಕಿಂತಲೂ ಹೆಚ್ಚಿನ ಮಕ್ಕಳ ದಾಖಲಾತಿಗನುಗುಣವಾಗಿ ಅಂತಹ ಶಾಲೆಗೆ ಪ್ರಸ್ತುತ ದೈಹಿಕ ಶಿಕ್ಷಕರನ್ನು ನೀಡಲಾಗುವುದು.<br><br>**ಸರ್ಕಾರಿ ಪ್ರೌಢಶಾಲೆ:-**<br>➢ ಪ್ರತಿ ಸರ್ಕಾರಿ ಪ್ರೌಢಶಾಲೆಗಳಲ್ಲಿ ಒಂದು ದೈಹಿಕ ಶಿಕ್ಷಕರ ಹುದ್ದೆಯನ್ನು ಮಂಜೂರು ಮಾಡಲಾಗಿರುತ್ತದೆ. |
| ಋ | ಹಾಗಾದಲ್ಲಿ ಇದನ್ನು ಸರಿಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು; | ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಖಾಲಿ ಇರುವ 2445 ದೈಹಿಕ ಶಿಕ್ಷಣ ಶಿಕ್ಷಕರ ಹುದ್ದೆಗಳ ಪೈಕಿ 2120 ಹುದ್ದೆಗಳನ್ನು ಭರ್ತಿ ಮಾಡುವ ಸಂಬಂಧ ಪ್ರಸ್ತಾವನೆಯನ್ನು ಆರ್ಥಿಕ ಇಲಾಖೆಯ ಪರಿಶೀಲನೆಯಲ್ಲಿರುತ್ತದೆ.<br><br>ಸರ್ಕಾರಿ ಪ್ರೌಢ ಶಾಲೆಗಳಲ್ಲಿ ಖಾಲಿ ಇರುವ 1500 ದೈಹಿಕ ಶಿಕ್ಷಣ ಶಿಕ್ಷಕರ ಹುದ್ದೆಗಳ ಪೈಕಿ 200 ಹುದ್ದೆಗಳಿಗೆ ನೇಮಕಾತಿ ಮಾಡುವ ಸಂಬಂಧ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರಿಗೆ ಸರ್ಕಾರದ ದಿನಾಂಕ: 13.09.2022ರ ಪತ್ರದಲ್ಲಿ ಅನುಮತಿ ನೀಡಲಾಗಿರುತ್ತದೆ. |

**ಸಂಖ್ಯೆ: ಇಪಿ 02 ಪಿಎಂಎ 2023**

**(ಬಿ.ಸಿ. ನಾಗೇಶ್)**
**ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ**
**ಸಕಾಲ ಸಚಿವರು**